**Friday 24th September 2021**

# RVCE Graduation Day Ceremony 2021

ಪುಷ್ಪ ನಮನ ಸಲ್ಲಿಸಿದರು. ಪ್ರಧಾನ ಕಾರ್ಯದರ್ಶಿ ಜಗದೀಶ್, ಗ್ರಾಪಂ ಮಾಜಿ ಅಧ್ಯಕ್ಷ ಚಿಕ್ಕರಾಜು, ಬಿಜೆಪಿ ಮುಖಂಡರಾದ ಮಣ್ಣಿನ ಮಗ ರಾಮಕೃಷ್ಣ, ದೇವರಾಜು, ಯಶೋಧಮ್ಮ, ಧರ್ಮಣ್ಣ ಮತ್ತಿತರರು ಉಪಸ್ಥಿತರಿದ್ದರು.

## ಸುಸ್ಥಿರ ಪರಿಸರ ನಿರ್ಮಾಣಕ್ಕೆ ವಿದ್ಯಾರ್ಥಿಗಳು ಸಮಯ ಮೀಸಲಿಡಿ




**ಕೆಂಗೇರಿ,ಸೆ.24-** ತಾಪಮಾನ ಏರಿಕೆ, ಹವಾಮಾನ ವೈಪರೀತ್ಯ ಹಾಗೂ ಪರಿಸರ ಮಾಲಿನ್ಯಕ್ಕೆ ಕಾರಣವಾಗಿರುವ ಅಂಶಗಳ ಪರಿಣಾಮದಿಂದ ಎದುರಾಗಿರುವ ಸಮಸ್ಯೆಗಳ ಪರಿಹಾರಕ್ಕೆ ವಿದ್ಯಾರ್ಥಿಗಳು ಸಮಯವನ್ನು ಮೀಸಲಿಟ್ಟು ಪರಿಶ್ರಮದ ಮೂಲಕ ತಾಂತ್ರಿಕ ಪರಿಣತಿ ಪಡೆದುಕೊಂಡು ಸುಸ್ಥಿರ ಪರಿಸರ ನಿರ್ಮಾಣಕ್ಕೆ ಕೊಡುಗೆ ನೀಡಬೇಕೆಂದು ಜರ್ಮನಿಯ ಡರ್ಟ್‌ಮಂಡ್ ಯೂನಿವರ್ಸಿಟಿ ಆಫ್ ಅಪ್ಲೈಡ್ ಸೈನ್ ಅಂಡ್ ಆರ್ಟ್ಸ್‌ನ ವೈಸ್ ರೆಕ್ಟರ್ ಡಾ.ಕ್ಯಾಟ್ರೀನ್ ಲ್ಯೋರ್ ತಿಳಿಸಿದರು.

ಮೈಸೂರು-ಬೆಂಗಳೂರು ಮುಖ್ಯ ರಸ್ತೆ ರಾವಿ ತಾಂತ್ರಿಕ ಮಹಾವಿದ್ಯಾಲಯ ಆವರಣದಲ್ಲಿ ಹಮ್ಮಿಕೊಂಡಿದ್ದ 11ನೇ ವರ್ಷದ ಪದವಿ ಪ್ರದಾನ ಸಮಾರಂಭದಲ್ಲಿ ಆನ್‌ಲೈನ್ ಮೂಲಕ ವಿದ್ಯಾರ್ಥಿಗಳನ್ನುದ್ದೇಶಿಸಿ ಅವರು ಮಾತನಾಡಿದರು.

ಭಾರತದ ಮಹಿಳೆಯರು ತಂತ್ರಜ್ಞಾನ ಕ್ಷೇತ್ರಕ್ಕೆ ಅಪಾರವಾದ ಕೊಡುಗೆ ನೀಡುವ ಮೂಲಕ ಐಟಿಬಿಟಿಯಿಂದ ಹಿಡಿದು ಆಟೋಮೋಟಿವ್ ಕ್ಷೇತ್ರದಲ್ಲಿನ ವಿಶ್ವದ ಅನೇಕ ಪ್ರತಿಷ್ಠಿತ ಕಂಪನಿಗಳ ಮುಖ್ಯಸ್ಥರಾಗಿ ಸೇವೆ ಸಲ್ಲಿಸುತ್ತಿದ್ದಾರೆ ಎಂದರು.

ವಿಶ್ವ ಅನೇಕ ರಾಷ್ಟ್ರಗಳು ಸಾಂಕ್ರಾಮಿಕ ರೋಗದ ಭೀತಿ ಎದುರಿಸುತ್ತಿರುವ ವಿಷಮ ಪರಿಸ್ಥಿತಿಯಲ್ಲಿ ವಿಜ್ಞಾನಿಗಳು, ತಂತ್ರಜ್ಞರು,ಇಂಜಿನಿಯರ್‌ಗಳು ತಮ್ಮ ಸಂಶೋಧನೆಗಳ ಮೂಲಕ ತಂತ್ರಜ್ಞಾನದ ಆವಿಷ್ಕಾರ ಕೈಗೊಂಡು ವಿಶ್ವಕ್ಕೆ ಸವಾಲಾಗಿದ್ದ ಸಾಂಕ್ರಾಮಿಕ ರೋಗದ ನಿರ್ಮೂಲನೆ ಪಣತೊಟ್ಟು ಕಾರ್ಯನಿರ್ವಹಿಸುವ ಮೂಲಕ ಸಮಾಜದ ಒಳಿತಿಗಾಗಿ ತಮ್ಮ ಜ್ಞಾನವನ್ನು ಸಮರ್ಪಿಸುತ್ತಿದ್ದಾರೆ ಎಂದು ಮೆಚ್ಚುಗೆ ವ್ಯಕ್ತಪಡಿಸಿದರು.

ರಾಷ್ಟ್ರೀಯ ಶಿಕ್ಷಣ ಸಮಿತಿ ಟ್ರಸ್ಟ್ ನ ಅಧ್ಯಕ್ಷ ಡಾ.ಎಂ.ಕೆ.ಪಾಂಡುರಂಗ ಶೆಟ್ಟಿ ಮಾತನಾಡಿ , ಶೈಕ್ಷಣಿಕ ಪ್ರಗತಿಗಾಗಿ ಗುಣಮಟ್ಟದ ಶಿಕ್ಷಣ ಮತ್ತು ಆಧುನಿಕ ಕಲಿಕಾ ವಿಧಾನಗಳನ್ನು ಅಳವಡಿಸಿಕೊಂಡು ವಿದ್ಯಾರ್ಥಿಗಳಿಗೆ ಉತ್ತಮ ಭವಿಷ್ಯ ರೂಪಿಸಿಕೊಳ್ಳಲು ನಮ್ಮ ಸಂಸ್ಥೆಯಿಂದ ಎಲ್ಲ ರೀತಿಯ ಸಹಕಾರ ನೀಡಲಾಗುತ್ತಿದೆ ಎಂದು ತಿಳಿಸಿದರು.

ಸ್ಪರ್ಧಾತ್ಮಕ ಯುಗದ ಅವಶ್ಯಕತೆಗನುಗುಣವಾಗಿ ನುರಿತ, ಪರಿಣಿತ ಪ್ರಾಧ್ಯಾಪಕರ ಮಾರ್ಗದರ್ಶನದಲ್ಲಿ ಕೌಶಲ್ಯಾಭಿವೃದ್ಧಿ ತರಬೇತಿ ನೀಡಿ ವಿದ್ಯಾರ್ಥಿಗಳು ತಂತ್ರಜ್ಞಾನದ ಆವಿಷ್ಕಾರಕ್ಕಾಗಿ ಸಂಶೋಧನೆ ಕೈಗೊಳ್ಳಲು ಎಲ್ಲರೀತಿಯ ವ್ಯವಸ್ಥೆ ಕಲ್ಪಿಸಿ ಪ್ರೋತ್ಸಾಹ ನೀಡಲಾಗುತ್ತಿದೆ ಎಂದು ತಿಳಿಸಿದರು.

ಆರ್.ಎಸ್.ಎಸ್.ಟಿ ಸಂಸ್ಥೆಯ ಎನ್.ಆರ್.ಪಂಡಿತರಾಧ್ಯ, ಉಪಾಧ್ಯಕ್ಷ ಹಯಗ್ರೀವ, ಖಜಾಂಚಿ ಕೆ.ಜಿ.ಸುಬ್ಬರಾವ್, ಕಾರ್ಯದರ್ಶಿ ಎವಿಎಸ್ ಮೂರ್ತಿ, ಸಹಕಾರ್ಯದರ್ಶಿ ಡಿ.ಪಿ.ನಾಗರಾಜ್ ಪ್ರಾಂಶುಪಾಲ ಡಾ.ಸುಬ್ರಹ್ಮಣ್ಯಂ ಮತ್ತಿತರರು ಉಪಸ್ಥಿತರಿದ್ದರು. ಇದೇ ವೇಳೆ ಅತಿ ಹೆಚ್ಚು ಅಂಕ ಪಡೆದ ಪ್ರತಿಭಾನ್ವಿತ ಎಂಟೆಕ್ ಮತ್ತು ಎಂ.ಸಿ.ಎನ 17 ವಿದ್ಯಾರ್ಥಿಗಳಿಗೆ ಮತ್ತು 12 ಬಿಇ ಪದವೀಧರರಿಗೆ ಪದವಿ ಪ್ರದಾನ ಸಮಾರಂಭದಲ್ಲಿ ಚಿನ್ನದ ಪದಕ ಹಾಗೂ ಪ್ರಮಾಣ ಪತ್ರ ನೀಡಲಾಯಿತು. 174 ಎಂಟೆಕ್,114 ಎಂಸಿಎ ಹಾಗೂ 1065 ಬಿಇ ಪದವೀಧರರಿಗೆ ವರ್ಚುಯಲ್ ಮೋಡ್ ಮೂಲಕ ಪದವಿ ಪ್ರಮಾಣ ಪತ್ರ ವಿತರಿಸಲಾಯಿತು.

Sat, 25 September 2021
https://epaper.eesanje.com/c/63346904